# ಚುನಾವಣಾ ಜರೂರು

## ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಸಂಖ್ಯೆ : ರಾಚುಆ: 07 :ಟಿಜೆಡ್‌ಪಿ.2016

ಕರ್ನಾಟಕ ರಾಜ್ಯ ಸಹಕಾರ ಮಾರಾಟ
ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ
ನಂ.8, ಕನ್ನಿಂಗ್ ಹ್ಯಾಂ ರಸ್ತೆ.
ಬೆಂಗಳೂರು–52, ದಿನಾಂಕ:18.01.2016

**–:ಸುತ್ತೋಲೆ:–**

ವಿಷಯ: ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿ ಸಾರ್ವತ್ರಿಕ ಚುನಾವಣೆ–2016ರ ಸಮಯದಲ್ಲಿ ಅನುಸರಿಸಬೇಕಾದ ಸದಾಚಾರ ಸಂಹಿತೆ ಬಗ್ಗೆ.

0–0–0

ರಾಜ್ಯ ಚುನಾವಣಾ ಆಯೋಗವು ಸ್ಥಳೀಯ ಸಂಸ್ಥೆಗಳ ಚುನಾವಣಾ ಸಂಬಂಧದಲ್ಲಿ ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳ ಮಾರ್ಗದರ್ಶನಕ್ಕಾಗಿ ಮಾದರಿ ಸದಾಚಾರ ಸಂಹಿತೆಯ ಕೈಪಿಡಿಯನ್ನು ಪ್ರಕಟಿಸಿದೆ.

ಸದರಿ ಕೈಪಿಡಿಯಲ್ಲಿರುವ ಅಂಶಗಳಲ್ಲದೆ ತಾಲ್ಲೂಕು ಪಂಚಾಯತಿ/ ಜಿಲ್ಲಾ ಪಂಚಾಯತಿ ಚುನಾವಣೆಗಳ ಸಮಯದಲ್ಲಿ ಅನುಸರಿಸಬೇಕಾದ/ಗಮನಿಸಬೇಕಾದ ಹೆಚ್ಚುವರಿ ಅಂಶಗಳನ್ನು ಈ ಕೆಳಕಂಡಂತೆ ನೀಡಲಾಗಿದೆ:

1. ಸದಾಚಾರ ಸಂಹಿತೆಯು ಚುನಾವಣೆಗಳು ಘೋಷಣೆಯಾದ **ದಿನಾಂಕ.18.01.2016** ರಿಂದ ಚುನಾವಣಾ ಪ್ರಕ್ರಿಯೆಯು ಮುಕ್ತಾಯಗೊಳ್ಳುವವರೆಗೂ ಅಂದರೆ **ದಿ.24.02.2016ರ** ವರೆಗೆ ಜಾರಿಯಲ್ಲಿರುತ್ತದೆ.
2. ಸದಾಚಾರ/ನೀತಿಸಂಹಿತೆಯು ಗ್ರಾಮೀಣ ಪ್ರದೇಶಗಳಲ್ಲಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳಾಗಿ ಉನ್ನತೀಕರಿಸಿರುವ ಆದರೆ ಚುನಾವಣೆ ನಡೆಯದೇ ಇರುವ ಗ್ರಾಮೀಣ ಪ್ರದೇಶಗಳ ವ್ಯಾಪ್ತಿಗೆ ಅನ್ವಯವಾಗುತ್ತದೆ. ಉಳಿದಂತೆ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗೆ ನೀತಿ ಸಂಹಿತೆಯು ಅನ್ವಯವಾಗುವುದಿಲ್ಲ.
3. ಜಿಲ್ಲಾ ಮಟ್ಟದಲ್ಲಿ ಮತ್ತು ತಾಲ್ಲೂಕು ಮಟ್ಟದಲ್ಲಿ ಸದಾಚಾರ ಸಂಹಿತೆಯನ್ನು ಜಾರಿಗೊಳಿಸುವ ಅಧಿಕಾರವು ಜಿಲ್ಲಾಧಿಕಾರಿಗಳಿಗೆ ನಿಹಿತವಾಗಿದೆ.
4. ತಾಲ್ಲೂಕು ಪಂಚಾಯತಿ/ ಜಿಲ್ಲಾ ಪಂಚಾಯತಿಗಳು ಚುನಾವಣಾ ಪೂರ್ವದಲ್ಲಿ ಪ್ರಾರಂಭಿಸಿರುವ/ ಜಾರಿಯಲ್ಲಿರುವ ಕಾಮಗಾರಿಗಳನ್ನು ಮುಂದುವರಿಸಲು ಹಾಗೂ ಈ ಸಂಬಂಧದ ಬಿಲ್ಲುಗಳ ಬಗ್ಗೆ ತಾಲ್ಲೂಕು ಪಂಚಾಯತಿ/ ಜಿಲ್ಲಾ ಪಂಚಾಯತಿ ಹಣವನ್ನು ಪಾವತಿ ಮಾಡಲು ನೀತಿಸಂಹಿತೆಯು ಅಡ್ಡಿ ಇರುವುದಿಲ್ಲ. ಆದರೆ ಸದರಿ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಯಾವುದೇ ಹೊಸ ಕಾಮಗಾರಿಗಳನ್ನು ಪ್ರಾರಂಭಿಸುವಂತಿಲ್ಲ.
5. ನೀತಿಸಂಹಿತೆ ಜಾರಿಯಲ್ಲಿರುವ ಅವಧಿಯಲ್ಲಿ ಮಂತ್ರಿಗಳು ಅಥವಾ ಶಾಸಕರ ಅಧ್ಯಕ್ಷತೆಯಲ್ಲಿ ಕೆ.ಡಿ.ಪಿ ಸಭೆ ಇತ್ಯಾದಿ ಯಾವುದೇ ಪರಿಶೀಲನಾ ಸಭೆಗಳನ್ನು ನಡೆಸತಕ್ಕದ್ದಲ್ಲ.
6. ಬರಪೀಡಿತ ಪ್ರದೇಶದಲ್ಲಿ ಕುಡಿಯುವ ನೀರನ್ನು ಅಥವಾ ಕುಡಿಯುವ ನೀರಿನ ಯೋಜನೆಯಡಿ ಕಾಮಗಾರಿಗಳನ್ನು ಪ್ರಾರಂಭಿಸಿ ಅನುಷ್ಠಾನಗೊಳಿಸಲು ನೀತಿಸಂಹಿತೆ ಅಡ್ಡಿ ಇರುವುದಿಲ್ಲ. ಆದರೆ ಅಂತಹ

ಯೋಜನೆಯ ಅನುಷ್ಠಾನವನ್ನು ಸಾರ್ವಜನಿಕ ಸಮಾರಂಭ ಅಥವಾ ರಾಜಕೀಯ ನಾಯಕರುಗಳ ಉಪಸ್ಥಿತಿಯಲ್ಲಿ ನಡೆಸುವುದು ನಿಷೇಧಿಸಲಾಗಿದೆ.

7. ನೆರೆ ಪೀಡಿತ ಹಾಗೂ ಪ್ರಕೃತಿ ವಿಕೋಪ ಪೀಡಿತ ಜನ ಸಮುದಾಯಕ್ಕೆ ನೀಡಲಾಗುವ ಯಾವುದೇ ಪರಿಹಾರ ಅಥವಾ ಸೌಲಭ್ಯಗಳಿಗೆ ನೀತಿ ಸಂಹಿತೆ ಅಡ್ಡಿಯಾಗುವುದಿಲ್ಲ.
8. ಸಂಬಂಧಪಟ್ಟ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆದು ಯಾವುದೇ ಸಾಂಸ್ಕೃತಿಕ ಹಾಗೂ ಧಾರ್ಮಿಕ ಸಭೆ ಮತ್ತು ಸಮಾರಂಭಗಳನ್ನು ನಡೆಸಲು ಅಡ್ಡಿ ಇಲ್ಲ ಆದರೆ ನೀತಿ ಸಂಹಿತೆಗೆ ಭಾದಕವಾಗುವ ರೀತಿಯಲ್ಲಿ ಮತದಾರರ ಮೇಲೆ ಪರಿಣಾಮ ಬೀರುವಂತಹ ಯಾವುದೇ ಘೋಷಣೆ, ಹೇಳಿಕೆ ಅಥವಾ ಅಶ್ವಾಸನೆ ಇತ್ಯಾದಿಗಳನ್ನು ಮಾಡುವಂತಿಲ್ಲ.
9. ನೇಮಕಾತಿ ನಿಯಮಗಳನ್ವಯ ಯಾವುದೇ ನೇಮಕಾತಿ ಪ್ರಕ್ರಿಯೆಯು ಈಗಾಗಲೇ ಪ್ರಾರಂಭಗೊಂಡಿದ್ದರೆ ಅದನ್ನು ನಿಲ್ಲಿಸುವ ಅಗತ್ಯವಿರುವುದಿಲ್ಲ. ಆದರೆ ಯಾವುದೇ ನೇಮಕಾತಿಯನ್ನು ಪ್ರಾರಂಭಿಸಲು ಅಧಿಸೂಚಿಸುವುದಾಗಲೀ ಅಥವಾ ಜಾರಿಯಲ್ಲಿರುವ ನೇಮಕಾತಿ ಪ್ರಕ್ರಿಯೆ ಅಂತಿಮಗೊಳಿಸಿ ನೇಮಕಾತಿ ಪಟ್ಟಿಯನ್ನು ಪ್ರಕಟಗೊಳಿಸಬಾರದು.
10. ಯಾವುದೇ ತಾತ್ಕಾಲಿಕ ಹುದ್ದೆಗಳಿಗೆ ನೇಮಕಾತಿ ಮಾಡಲು ಅವಕಾಶವಿರುವುದಿಲ್ಲ. ಆದರೆ ಯಾವುದಾದರೂ ತುರ್ತು ಸೇವೆಗೆ ನೇಮಕಾತಿ ಅವಶ್ಯಕವಿದ್ದಲ್ಲಿ ಆಯೋಗದ ಅನುಮೋದನೆ ಪಡೆದು ನೇಮಕಾತಿ ಮಾಡಬಹುದು.
11. ಯಾವುದೇ ಇಲಾಖೆಯಲ್ಲಿ ಸಾಮಾನ್ಯ ಮುಂಬಡ್ತಿಯನ್ನು ನೀಡುವುದು ಅತೀ ಅವಶ್ಯವಿದ್ದಲ್ಲಿ ಆಯೋಗದ ಅನುಮೋದನೆ ಪಡೆದು ಮಾಡಬಹುದಾಗಿದೆ.
12. ಯಾವುದೇ ಇಲಾಖೆಯ ಸರ್ಕಾರಿ ನೌಕರರನ್ನು ಆಯೋಗದ ಅನುಮತಿಯಿಲ್ಲದೇ ವರ್ಗಾವಣೆ ಮಾಡತಕ್ಕದ್ದಲ್ಲ. ಆದರೆ ಒಂದು ವೇಳೆ ಹುದ್ದೆಗಳು ಖಾಲಿಯಿದ್ದಲ್ಲಿ ಹಾಗೂ ಯಾವುದೇ ಸರ್ಕಾರಿ ನೌಕರರು ಸ್ಥಳ ನಿಯುಕ್ತಿಗಾಗಿ ಕಾಯುತ್ತಿದ್ದಲ್ಲಿ ಅಂತಹ ನೌಕರರನ್ನು ಖಾಲಿಯಿರುವ ಹುದ್ದೆಗಳಿಗೆ ಆಯೋಗದ ಅನುಮತಿಯೊಂದಿಗೆ ಮಾಡಬಹುದಾಗಿದೆ. ಆದರೆ ಒಂದು ನೇಮಕಾತಿಗಾಗಿ ಹಲವು ಬದಲಾವಣೆಯನ್ನು ಮಾಡುವುದನ್ನು ನಿಷೇಧಿಸಲಾಗಿದೆ.
13. ಪಡಿತರ ಚೀಟಿ ವಿತರಣೆ ಅಥವಾ ಇತರೆ ಯಾವುದೇ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನದಂತಹ ವಿಷಯಗಳಲ್ಲಿ ತೀರ್ಮಾನ ತೆಗೆದುಕೊಳ್ಳುವ ಸಭೆಗಳನ್ನು ಸಚಿವರು/ ಶಾಸಕರು ಮತ್ತು ಅಧಿಕಾರಿಗಳು ನಡೆಸುವುದು ನೀತಿ ಸಂಹಿತೆಯ ಉಲ್ಲಂಘನೆಯಾಗುತ್ತದೆ.
14. ಮಂತ್ರಿಗಳು ಮತ್ತು ಶಾಸಕರು ಯಾವುದೇ ಸರ್ಕಾರಿ ಕಾರ್ಯಕ್ರಮಗಳಲ್ಲಿ ಮತದಾರರನ್ನು ಪ್ರಾಭಾವಿಸುವಂಥಹ ಸಮಾರಂಭಗಳನ್ನು ನಡೆಸುವುದನ್ನು ನಿಷೇಧಿಸಲಾಗಿದೆ.
15. ಮಂತ್ರಿಗಳು, ಶಾಸಕರು, ಇನ್ನಾವುದೇ ಅಧಿಕಾರೇತರ ಸದಸ್ಯರು, ನಿಗಮ ಮತ್ತು ಮಂಡಳಿ ಅಧ್ಯಕ್ಷರುಗಳಿಗೆ ಒದಗಿಸಿರುವ ಸರ್ಕಾರಿ ವಾಹನಗಳನ್ನು ಚುನಾವಣೆ ಸಂಬಂಧದ ಸಭೆ/ಸಮಾರಂಭ/ಪ್ರಚಾರಕ್ಕೆ ಬಳಸಿಕೊಂಡಲ್ಲಿ ನೀತಿ ಸಂಹಿತೆ ಉಲ್ಲಂಘನೆಯಾಗುತ್ತದೆ.
16. ವಿಧಾನ ಮಂಡಲ ಮತ್ತು ಸಂಸತ್ ಸದಸ್ಯರುಗಳಿಗೆ ಜಿಲ್ಲಾ ಮಟ್ಟದಲ್ಲಿ ಅಥವಾ ತಾಲ್ಲೂಕು ಮಟ್ಟದಲ್ಲಿ ಅವರ ಸಾಮಾನ್ಯ ಕರ್ತವ್ಯ ನಿರ್ವಹಣೆಗೆ ಒದಗಿಸಲಾಗಿರುವ ಸರ್ಕಾರಿ ವಾಹನವನ್ನು ಜಿಲ್ಲಾಧಿಕಾರಿಗಳು ವಶಕ್ಕೆ ತೆಗೆದುಕೊಳ್ಳುವ ಅಗತ್ಯವಿರುವುದಿಲ್ಲ. ಆದರೆ ಚುನಾವಣಾ ಪ್ರಚಾರ ಅಥವಾ ಚುನಾವಣಾ ಸಂಬಂಧದ ಕಾರ್ಯಗಳಿಗೆ ಬಳಸಿದಲ್ಲಿ ಅದನ್ನು ತಕ್ಷಣ ಜಿಲ್ಲಾಧಿಕಾರಿಗಳು ವಶಕ್ಕೆ ಪಡೆದುಕೊಳ್ಳುವುದು.
17. ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರುಗಳಿಗೆ ಒದಗಿಸಲಾಗಿರುವ ಸರ್ಕಾರಿ ವಾಹನಗಳನ್ನು ಚುನಾವಣಾ ಪ್ರಾರಂಭದಿಂದ ಮುಕ್ತಾಯವಾಗುವವರೆಗೆ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ವಶದಲ್ಲಿರತಕ್ಕದ್ದು.

18. <u>ಮತದಾರರ ಮೇಲೆ ಪ್ರಭಾವ ಬೀರುವಂತಹ</u> ಯಾವುದೇ ಸರ್ಕಾರಿ ಕಾರ್ಯಕ್ರಮ ಆಯೋಜಿಸುವಂತಿಲ್ಲ.
19. ಸರ್ಕಾರಿ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ರಾಜಕೀಯ ಮುಖಂಡರ ಭಾವಚಿತ್ರಗಳನ್ನೊಳಗೊಂಡ ಭಿತ್ತಿಪತ್ರ/ ಬ್ಯಾನರ್/ ಕಟೌಟ್/ ಬೋರ್ಡ್ ಇತ್ಯಾದಿಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಅಂಟಿಸಬಾರದು. ನೀತಿಸಂಹಿತೆ ಜಾರಿ ಇರುವ ಸಂದರ್ಭದಲ್ಲಿ ಅವುಗಳನ್ನು ಸಂಬಂಧಪಟ್ಟ ಪ್ರಾಧಿಕಾರಗಳು ತೆರವುಗೊಳಿಸುವುದು.
20. ಸದಾಚಾರ ಸಂಹಿತೆ ಜಾರಿಯಲ್ಲಿರುವ ಸಂದರ್ಭದಲ್ಲಿ ಸರ್ಕಾರಿ ವಾಹನಗಳ ಮೇಲೆ ರಾಜಕೀಯ ಮುಖಂಡರ/ನಾಯಕರ ಭಾವಚಿತ್ರಗಳನ್ನು, ಭಿತ್ತಿಪತ್ರಗಳನ್ನು, ಪೋಸ್ಟರ್‌ಗಳನ್ನು, ಕಟೌಟ್‌ಗಳನ್ನು ಪ್ರದರ್ಶಿಸುವುದನ್ನು ನಿಷೇಧಿಸಲಾಗಿದೆ. ಈ ಸಂದರ್ಭದಲ್ಲಿ ಸಂಬಂಧಪಟ್ಟ ಸಾರಿಗೆ ಇಲಾಖೆ/ವಾರ್ತಾ ಇಲಾಖೆ ಇವರು ಸೂಕ್ತ ಕ್ರಮ ಕೈಗೊಳ್ಳುವುದು.
21. ಸರ್ಕಾರಿ ಜಾಹೀರಾತಿನಲ್ಲಿ/ ಸರ್ಕಾರದ ಮಾರಾಟ ಉತ್ಪನ್ನಗಳ ಮೇಲೆ ರಾಜಕೀಯ ನಾಯಕರ ಭಾವ ಚಿತ್ರವಿರುವುದು ನೀತಿಸಂಹಿತೆ ಉಲ್ಲಂಘನೆಯಾಗುತ್ತದೆ. ಮಾರಾಟ ಸರಕು ಉತ್ಪನ್ನಗಳ ಮೇಲೆ ರಾಜಕೀಯ ನಾಯಕರ ಭಾವಚಿತ್ರವನ್ನು ಈಗಾಗಲೇ ಮುದ್ರಿಸಲಾಗಿದ್ದಲ್ಲಿ ಅದನ್ನು ಮರೆಮಾಚಿ ನಂತರ ಮಾರಾಟ ಮಾಡಬಹುದಾಗಿದೆ.
22. ಮೇಲ್ಕಂಡವುಗಳಲ್ಲದೆ ಸದಾಚಾರ ಸಂಹಿತೆಯ ಕಟ್ಟುನಿಟ್ಟಾದ ಪಾಲನೆಗಾಗಿ ಅವಶ್ಯವೆನಿಸಿದಲ್ಲಿ ರಾಜ್ಯ ಚುನಾವನಾ ಆಯೋಗವು ಆದೇಶಗಳನ್ನು, ನಿರ್ದೇಶನಗಳನ್ನು ಮತ್ತು ಸೂಚನೆಗಳನ್ನು ಹೊರಡಿಸುತ್ತದೆ.

(ಆರ್. ಚಂದ್ರಶೇಖರ್)
ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ

ಪ್ರತಿಯನ್ನು :

1. ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
2. ಎಲ್ಲಾ ಸಚಿವರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಎಲ್ಲಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು.
4. ಎಲ್ಲಾ ಜಿಲ್ಲಾಧಿಕಾರಿಗಳು.

ಜೆಪಿ